# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 236 |
| 2) | ಸದಸ್ಯರ ಹೆಸರು | ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 11/07/2018 |
| 4) | ಉತ್ತರಿಸುವವರು | ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

*****

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪಿ.ಎಸ್.ಥಾಮಸ್ ವರದಿ ಅನ್ವಯ ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ನೌಕರರಿಗೆ ಕಾಲಬದ್ಧ (10,15,20 ವರ್ಷಗಳ ಟೈಂಬಾಂಡ್ ಬಡ್ತಿ) ಸೌಲಭ್ಯ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಅದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು: | ರಾಜ್ಯದಲ್ಲಿನ 196 ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳಂತೆ 10 ವರ್ಷಗಳ ಕಾಲಬದ್ಧ ವೇತನ ಮುಂಬಡ್ತಿ ಹಾಗೂ 15, 20 ವರ್ಷಗಳ ಒಂದು ಹೆಚ್ಚುವರಿ ವೇತನ ಬಡ್ತಿಗಳ ಸೌಲಭ್ಯವನ್ನು ಅನುದಾನಿತ ಸಂಸ್ಥೆಗಳ ಅರ್ಹ ಸಿಬ್ಬಂದಿಗಳಿಗೆ ನೀಡಲಾಗುತ್ತಿದ್ದು, ಕಾಲಕಾಲಕ್ಕೆ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | ಸರ್.ಸಿದ್ದಪ್ಪ ಕಂಬಳಿ ಸ್ಮಾರಕ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ಗದಗ ಹಾಗೂ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ಶಿವಬಸವ ನಗರ, ಬೆಳಗಾವಿ ಈ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಯವರಿಗೆ 10, 15, 20 ವರ್ಷದ ಟೈಂಬಾಂಡ್ ನೀಡದೇ ಇರಲು ಕಾರಣಗಳೇನು? | ಸರ್.ಸಿದ್ದಪ್ಪ ಕಂಬಳಿ ಸ್ಮಾರಕ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ಗದಗ ಸಂಸ್ಥೆಯ ಅರ್ಹ ಸಿಬ್ಬಂದಿಯವರಿಗೆ ಈಗಾಗಲೇ 10 ವರ್ಷಗಳ ಕಾಲಬದ್ಧ ವೇತನ ಮುಂಬಡ್ತಿಯನ್ನು, ಹಾಗೂ 15 ವರ್ಷಗಳ ಹೆಚ್ಚುವರಿ ವೇತನ ಬಡ್ತಿಗಳ ಸೌಲಭ್ಯವನ್ನು ಥಾಮಸ್ ವರದಿಯ ಆದೇಶವನ್ನು ಅನುಷ್ಠಾನಗೊಳಿಸಿ ವೇತನ ನಿಗದಿಗೊಳಿಸುವ ಸಮಯದಲ್ಲಿಯೇ ನೀಡಲಾಗಿರುತ್ತದೆ<br>20 ವರ್ಷದ ಟೈಂಬಾಂಡ್ ಪ್ರಸ್ತಾವನೆ ಸ್ವೀಕೃತವಾದ ನಂತರ ಕ್ರಮ ವಹಿಸಲಾಗುವುದು.<br>ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ, ಶಿವಬಸವ ನಗರ ಬೆಳಗಾವಿ ಸಂಸ್ಥೆಯಲ್ಲಿ 10 ವರ್ಷಗಳ ಕಾಲಬದ್ಧ ವೇತನ ಮುಂಬಡ್ತಿಗಾಗಿ ಪ್ರಸ್ತಾವನೆ ಸ್ವೀಕೃತವಾದ ನಂತರ ಪರಿಶೀಲಿಸಿ ಕ್ರಮವಹಿಸಲಾಗುವುದು. |
| ಇ) | ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯ ನೌಕರರಿಗೆ ನಿವೃತ್ತಿ ಸೌಲಭ್ಯ ನೀಡುವಲ್ಲಿ ಕೂಡಾ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಈ ಕುರಿತು ಇನ್ನೂ ಇತ್ಯರ್ಥವಾಗದೇ ಉಳಿದಿರುವ ಕಡತಗಳನ್ನು ಎಲೇವಾರಿ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು? | ರಾಜ್ಯದ ಅನುದಾನಿತ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳ ನಿವೃತ್ತ 75 ಸಿಬ್ಬಂದಿಗಳಿಂದ ಪಿಂಚಣಿ ಪ್ರಸ್ತಾವನೆಗಳು ಆಯುಕ್ತಾಲಯದಲ್ಲಿ ಸ್ವೀಕೃತವಾಗಿದ್ದು, ಅವುಗಳ ಪೈಕಿ 51 ನಿವೃತ್ತ ಸಿಬ್ಬಂದಿಗಳಿಗೆ ಪಿಂಚಣಿಯನ್ನು ನೀಡಲಾಗಿರುತ್ತದೆ. ಉಳಿದ 24 ಪ್ರಸ್ತಾವನೆಗಳು ಪರಿಶೀಲನಾ ಹಂತದಲ್ಲಿದ್ದು, ಶೀಘ್ರದಲ್ಲಿ ಇತ್ಯರ್ಥಗೊಳಿಸಲಾಗುವುದು. |

ಸಂಖ್ಯೆ: ಕೌಉಜೀಇ 48 ಕೈತಪ್ರ 2018

(ಆರ್.ವಿ. ದೇಶಪಾಂಡೆ)
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು